ಅಸಲು ದಾವಾಃ 196/2015 ಪಿಡಬ್ಲ್ಯೂಃ-1

ದಿನಾಂಕಃ 21.10.2024 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಭೋಧಿಸಲಾಯಿತು.

ಪಾಟೀ ಸವಾಲುಃ- ಪ್ರತಿವಾದಿ ಪರ ಶ್ರೀ.ಎಸ್ ಎಂ ಬಿ ವಕೀಲರು

ನಾನು ಪ್ರತಿವಾದಿಯ ವಿರುದ್ದ ನನ್ನ ಸೈಟ್ ನ್ನು ಪೋರ್ಜರಿ ಮಾಡಿರುತ್ತಾರೆ ಎಂದು ದಾವೆ ಹಾಕಿರುತ್ತೇನೆ. ಯಾವ ಆಸ್ತಿಗೆ ದಾವೆ ಹಾಕಿರುತ್ತೀರಿ ಎಂದರೆ ಸಾಕ್ಷಿಯು ಮನೆ ಮತ್ತು ಸೈಟ್ ಗೆ ಸಂಬಂಧಿಸಿದಂತೆ ದಾವೆಯನ್ನು ಹಾಕಿರುತ್ತೇನೆ ಎಂದು ನುಡಿಯುತ್ತಾರೆ. ಆಸ್ತಿ ನಂಬರ್ ಈಗ ನೆನೆಪಿಲ್ಲ. ಯಾವ ಆಧಾರದ ಮೇಲೆ ದಾವಾ ಆಸ್ತಿ ನನ್ನ ಹೆಸರಿಗೆ ಬಂದಿರುತ್ತದೆ ಎಂದರೆ ಸಾಕ್ಷಿ ಪಟ್ಟಾ ಆಧಾರದ ಮೇಲೆ ಖಾತೆ ಆಗಿರುತ್ತದೆ ಎಂದು ನುಡಿಯುತ್ತಾರೆ ಆದರೆ ಯಾವ ವರ್ಷ ಪಟ್ಟಾ ಕೊಟ್ಟಿರುತ್ತಾರೆ ಎಂದು ನನಗೆ ಈಗ ನೆನಪಿಲ್ಲ. ನನಗೆ ದಾವಾ ಆಸ್ತಿಗೆ ಸಂಬಂಧಿಸಿದಂತೆ ನನಗೆ ಸರ್ಕಾರದಿಂದ ಯಾವುದೇ ಪಟ್ಟಾ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗೆ ಪಟ್ಟಾ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿ ನಮ್ಮ ಸಮುದಾಯದವರು ಆದರೆ ಸಂಬಂಧಿಕರಲ್ಲ. ಯಾವ ಆಧಾರದ ಮೇಲೆ ಸರ್ಕಾರದವರು ನಮಗೆ ಪಟ್ಟಾ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಮನೆ ಇರಲಿಲ್ಲ ಹಾಗಾಗಿ ಪಟ್ಟಾ ಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯಲ್ಲಿ ಪ್ರತಿವಾದಿ ಮನೆ ಕಟ್ಟಿಕೊಂಡು ವಾಸವಿರುತ್ತಾರೆ ಎಂದರೆ ಸರಿಯಲ್ಲ ಮುಂದುವರೆದು ಸಾಕ್ಷಿಯು ಮನೆ ನಾನು ಕಟ್ಟಿರುತ್ತೇನೆ ಎಂದು ನುಡಿಯುತ್ತಾರೆ. ನೆರಳು ಭಾಗ್ಯ ಯೋಜನೆಯಡಿಯಲ್ಲಿ ಪ್ರತಿವಾದಿಗೆ ಮನೆ ಮಂಜೂರಾಗಿದ್ದರಿಂದ ಪ್ರತಿವಾದಿ ದಾವಾ ಆಸ್ತಿಯಲ್ಲಿ ಮನೆ ಕಟ್ಟಿಕೊಂಡು ವಾಸವಿರುತ್ತಾರೆ ಎಂದರೆ ಸರಿಯಲ್ಲ. 1995 ರಲ್ಲಿ ಗ್ರಾಮ ಪಂಚಾಯತಿಯವರು ಪ್ರತಿವಾದಿಗೆ ಮನೆ ಮಂಜೂರು ಮಾಡಿರುತ್ತಾರೆ ಎಂದರೆ ಸರಿಯಲ್ಲ. 1995 ರಿಂದಲೂ ದಾವಾ ಆಸ್ತಿಯಲ್ಲಿ ಪ್ರತಿವಾದಿ ಮನೆ ಕಟ್ಟಿಕೊಂಡು ವಾಸವಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಮನೆ ಕಂದಾಯ, ವಿದ್ಯುತ್ ಬಿಲ್ಲುಗಳು, ನೀರಿನ ಕಂದಾಯದ ಬಿಲ್ಲುಗಳು ಪ್ರತಿವಾದಿಯ ಹೆಸರಿನಲ್ಲಿದ್ದು ಪ್ರತಿವಾದಿಯೇ ದಾವಾ ಆಸ್ತಿಯ ಕಂದಾಯಗಳನ್ನು ಕಟ್ಟಿಕೊಂಡು ಹೋಗುತ್ತಿದ್ದಾರೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ